೨೧

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಹಣಮಂತ ಆರ್. ನಿರಾಣಿ, ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ, ಶ್ರೀಮತಿ ಹೇಮಲತಾ ನಾಯಕ್ ಹಾಗೂ ಶ್ರೀ ಕೇಶವ ಪ್ರಸಾದ್.ಎಸ್ ಇವರ ನಿಯಮ 330ರ ಸೂಚನೆಗೆ ಉತ್ತರ:**

**ಸೂಚನೆ:**

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣಕ್ಕಾಗಿ 2023-24 ಮತ್ತು 2024-25ನೇ ಸಾಲಿನಲ್ಲಿ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಯಡಿ ಮೀಸಲಿಟ್ಟ ಅನುದಾನವನ್ನು ರಾಜ್ಯ ಸರ್ಕಾರವು ವಿವಿಧ ಯೋಜನೆಗಳ ಅನುಷ್ಠಾನಕ್ಕಾಗಿ ಬಳಕೆ ಮಾಡಿಕೊಳ್ಳಲು ಉದ್ದೇಶಿಸಿರುವುದರಿಂದ ದಲಿತರಿಗೆ ಅನ್ಯಾಯ ಮಾಡಿದಂತಾಗುತ್ತದೆ. ಪರಿಶಿಷ್ಟರ ಕಲ್ಯಾಣಕ್ಕಾಗಿ ಮೀಸಲಿಟ್ಟ ಹಣವನ್ನು ಅನ್ಯ ಉದ್ದೇಶಕ್ಕಾಗಿ ಬಳಸುವುದು ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಯನ್ನು ದುರ್ಬಳಕೆ ಮಾಡಿದಂತಾಗಿ, ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಕಾಯ್ದೆಯ ಉಲ್ಲಂಘನೆಯಾಗಿರುತ್ತದೆ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಶ್ರೇಯೋಭಿವೃದ್ಧಿಗೆ ಬಳಕೆ ಮಾಡಬೇಕಾದ ಅನುದಾನಕ್ಕೆ ಕೊಕ್ಕೆ ಹಾಕಿ ಸರ್ಕಾರದ ವಿವಿಧ ಯೋಜನೆಗಳಿಗೆ ಅನುದಾನವನ್ನು ಬಳಕೆ ಮಾಡುವುದರಿಂದ ತಳಸಮುದಾಯಗಳ ಅಭಿವೃದ್ಧಿ ಹಿನ್ನಡೆಯಾಗುತ್ತದೆ. 7ಡಿ ಕಾಯ್ದೆಯನ್ನು ತೆಗೆದು ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಯಡಿ ಮೀಸಲಿಟ್ಟ ಅನುದಾನವನ್ನು ಯಾವುದಕ್ಕೂ ವರ್ಗಾವಣೆ ಮಾಡುವುದಿಲ್ಲ ಎಂದು ಆಶ್ವಾಸನೆ ನೀಡಿದ ಸರ್ಕಾರ 2023-24 ಮತ್ತು 2024-25ನೇ ಸಾಲಿನಲ್ಲಿ ಒಟ್ಟು 24 ಸಾವಿರ ಕೋಟಿಗಳಿಗೂ ಅಧಿಕ ಮೊತ್ತವನ್ನು ವಿವಿಧ ಯೋಜನೆಗಳ ಅನುಷ್ಠಾನಕ್ಕೆ ವರ್ಗಾವಣೆ ಮಾಡಿರುವುದರಿಂದ ದಲಿತರ ಶ್ರೇಯೋಭಿವೃದ್ಧಿಗೆ ಹಿನ್ನಡೆಯಾಗುತ್ತದೆ. ಅನ್ಯ ಉದ್ದೇಶಕ್ಕೆ ಮತ್ತು ವಿವಿಧ ಯೋಜನೆಗಳ ಅನುಷ್ಠಾನಕ್ಕೆ ಬಳಕೆ ಮಾಡಿರುವ ಹಣವನ್ನು ಮತ್ತೆ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಯಲ್ಲಿ ವಿನಿಯೋಗ ಮಾಡಲು ಸರ್ಕಾರ ಕ್ರಮ ತೆಗೆದುಕೊಳ್ಳುವಂತೆ ಮತ್ತು ತಳಸಮುದಾಯಗಳಿಗೆ ಅನ್ಯಾಯವಾಗದಂತೆ ಸೂಕ್ತ ಕ್ರಮವಹಿಸುವ ನಿಟ್ಟಿನಲ್ಲಿ ಈ ವಿಷಯವನ್ನು ಪ್ರಸ್ತಾಪಿಸಬಯಸುತ್ತೇನೆ.

**ಉತ್ತರ:**

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಜನಸಂಖ್ಯೆಗೆ ಅನುಗುಣವಾಗಿ ಅಭಿವೃದ್ಧಿ ಆಯವ್ಯಯದಲ್ಲಿ ಅನುದಾನ ಮೀಸಲಿಡಲು ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಕಾಯ್ದೆ 2013 ಅನ್ನು ಜಾರಿಗೆ ತರಲಾಗಿದೆ.

2011ರ ಜನಗಣತಿಯ ಪ್ರಕಾರ ಪರಿಶಿಷ್ಟ ಜಾತಿಯವರ ಜನಸಂಖ್ಯೆ 17.15% ಮತ್ತು ಪರಿಶಿಷ್ಟ ಪಂಗಡದವರ ಜನಸಂಖ್ಯೆ 6.95% ಇದ್ದು, ಒಟ್ಟು 24.10% ಆಗುತ್ತದೆ. ಇದರನ್ವಯ ಪ್ರತಿ ವರ್ಷ ಅಭಿವೃದ್ಧಿ ಆಯವ್ಯಯದಲ್ಲಿ 24.10% ಅನುದಾನವನ್ನು ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅಡಿ ಹಂಚಿಕೆ ಮಾಡಲಾಗುತ್ತದೆ.

ಕಾಯ್ದೆಯ ಸೆಕ್ಷನ್ 7(ಎ), 7(ಬಿ), 7(ಸಿ) ಮತ್ತು 7(ಡಿ) ಯಡಿ ವಿವಿಧ ಕಾರ್ಯಕ್ರಮಗಳಿಗೆ ಅನುದಾನ ಹಂಚಿಕೆ ಮಾಡಲು ಅವಕಾಶವಿರುತ್ತದೆ. ಎಸ್.ಸಿ./ಎಸ್.ಟಿ ಜನರ ವೈಯಕ್ತಿಕ ಮತ್ತು ವಾಸಸ್ಥಳ ಅಭಿವೃದ್ಧಿಗೆ ಪೂರಕವಾಗಿರುವ ಕಾರ್ಯಕ್ರಮಗಳಿಗೆ ಸೆಕ್ಷನ್ 7(ಎ), 7(ಬಿ) ಮತ್ತು 7(ಸಿ)ಯಡಿ ಅನುದಾನ ಹಂಚಿಕೆ ಮಾಡಲಾಗುತ್ತದೆ.

ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅಧಿನಿಯಮ 2013 ರ ಸೆಕ್ಷನ್ 7(ಸಿ) ಯಡಿ ``ಸಾಮಾನ್ಯ ಸಾಮಾಜಿಕ ವಲಯದ ಸ್ಕೀಮುಗಳು" ಎಂದರೆ, ಉಪ-ಯೋಜನೆಗಳಲ್ಲಿ ಸೇರಿಸಿರುವ ಶಿಕ್ಷಣ, ಆರೋಗ್ಯ, ಮಹಿಳಾ ಮತ್ತು ಮಕ್ಕಳು, ಕಾರ್ಮಿಕ, ದೈಹಿಕ ವಿಕಲ ಚೇತನರ ಸ್ಕೀಮುಗಳು, ಅನುಸೂಚಿತ ಜಾತಿಗಳು/ಅನುಸೂಚಿತ ಪಂಗಡದ ವ್ಯಕ್ತಿಗಳಿಗೆ ಅಥವಾ ಅನುಸೂಚಿತ ಜಾತಿಗಳು/ ಅನುಸೂಚಿತ ಪಂಗಡದ ಕುಟುಂಬಗಳಿಗೆ, ಇತರರ ಜೊತೆಯಲ್ಲಿ ಪ್ರಯೋಜನವಾಗುವಂತಿದ್ದರೆ, ಸ್ಕೀಮಿನ

---2

ವೆಚ್ಚವನ್ನು, ಅನುಸೂಚಿತ ಜಾತಿಗಳು/ಅನುಸೂಚಿತ ಪಂಗಡದ ಫಲಾನುಭವಿಗಳ ಜನ ಸಂಖ್ಯೆಯ ಪ್ರಮಾಣಕ್ಕನುಗುಣವಾಗಿ ಅನುಸೂಚಿತ ಜಾತಿಗಳ ಉಪ-ಯೋಜನೆ ಅಥವಾ ಬುಡಕಟ್ಟು ಉಪ-ಯೋಜನೆ ಅಡಿಯಲ್ಲಿ ಹಂಚಿಕೆ ಮಾಡತಕ್ಕದ್ದು ಮತ್ತು ಲೆಕ್ಕ ತೋರಿಸತಕ್ಕದ್ದು; ಎಂದು ತಿಳಿಸಲಾಗಿದೆ.

ಅದರಂತೆ, ಶಿಕ್ಷಣ, ಆರೋಗ್ಯ, ಕೃಷಿ, ತೋಟಗಾರಿಕೆ, ನೀರಾವರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಆರ್.ಡಿ.ಪಿ.ಆರ್., ಯೋಜನಾ, ಇಂಧನ ಇತ್ಯಾದಿ ಇಲಾಖೆಗಳ ಈ ಕೆಳಗಿನ ಕಾರ್ಯಕ್ರಮಗಳಿಗೆ ಈ ಹಿಂದೆಯೂ ಅನುದಾನವನ್ನು ಹಂಚಿಕೆ ಮಾಡಲಾಗುತ್ತಿತ್ತು.

1. 10 ಹೆಚ್.ಪಿ ವರೆಗಿನ ಪಂಪ್ ಸೆಟ್‌ಗಳಿಗೆ ವಿದ್ಯುತ್ ಸಹಾಯಧನ
2. ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ
3. ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ಯೋಜನೆ
4. ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆ
5. ಮುಖ್ಯಮಂತ್ರಿ ಸೂಕ್ಷ್ಮ ನೀರಾವರಿ ಯೋಜನೆ
6. ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ
7. ಕೃಷಿ ಭಾಗ್ಯ
8. ರಾಷ್ಟ್ರೀಯ ಆಹಾರ ಸುರಕ್ಷತೆ ಮಿಷನ್
9. ರಾಷ್ಟ್ರೀಯ ತೋಟಗಾರಿಕಾ ಮಿಷನ್
10. ಸಮಗ್ರ ತೋಟಗಾರಿಕೆ ಅಭಿವೃದ್ಧಿ
11. ಹಾಲು ಉತ್ಪಾದಕರಿಗೆ ಪ್ರೋತ್ಸಾಹಧನ
12. ಮಹಾತ್ಮಾ ಗಾಂಧಿ ಉದ್ಯೋಗ ಖಾತರಿ ಯೋಜನೆ
13. ಸ್ವಚ್ಛ ಭಾರತ ಅಭಿಯಾನ
14. ಗ್ರಾಮೀಣ ಕುಡಿಯುವ ನೀರು ಸರಬರಾಜು ಯೋಜನೆ (ಜಲ ಜೀವನ್ ಮಿಷನ್)
15. ನಮ್ಮ ಗ್ರಾಮ ನಮ್ಮ ರಸ್ತೆ
16. ಭಾಗ್ಯಲಕ್ಷ್ಮಿ
17. ವಿಕಲಚೇತನರ ಅಭಿವೃದ್ಧಿ ಕಾರ್ಯಕ್ರಮಗಳು
18. ಅಂಗನವಾಡಿ ಮಕ್ಕಳಿಗೆ ರಾಷ್ಟ್ರೀಯ ಪೌಷ್ಟಿಕ ಆಹಾರ ಯೋಜನೆ
19. ಶಾಲಾ ಮಕ್ಕಳಿಗೆ ಮಧ್ಯಾಹ್ನದ ಬಿಸಿಯೂಟ ಯೋಜನೆ
20. ಆರ್.ಟಿ.ಇ ಖಾಸಗಿ ಶಾಲೆಗಳ ಶುಲ್ಕ ಮರುಪಾವತಿ.
21. ವಿದ್ಯಾವಿಕಾಸ ಯೋಜನೆ
22. ಸರ್ವಶಿಕ್ಷಣ ಅಭಿಯಾನ ಮತ್ತು ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ.
23. ಅನ್ನಭಾಗ್ಯ ಯೋಜನೆ.
24. ಕಂದಾಯ ಇಲಾಖೆಯ ಮೂಲಕ ವೃದ್ಧಾಪ್ಯ ವೇತನ, ವಿಧವಾ ವೇತನ ಸೇರಿದಂತೆ ವಿವಿಧ ಪಿಂಚಣಿಗಳು.
25. ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿ, ಬಯಲುಸೀಮೆ ಅಭಿವೃದ್ಧಿ ಮಂಡಳಿ, ಮಲೆನಾಡು ಅಭಿವೃದ್ಧಿ ಮಂಡಳಿ ಇತ್ಯಾದಿ ಮಂಡಳಿಗಳ ಮೂಲಕ ಅನುಷ್ಠಾನ ಮಾಡುವ ಕಾರ್ಯಕ್ರಮಗಳು.

ಪ್ರಸಕ್ತ ಸಾಲಿನಲ್ಲಿ ಸರ್ಕಾರದ ಪ್ರಮುಖ ಯೋಜನೆಗಳಾದ ಈ ಕೆಳಗಿನ ಕಾರ್ಯಕ್ರಮಗಳು ಎಸ್.ಸಿ/ಎಸ್.ಟಿ ಜನರಿಗೆ ನೇರವಾಗಿ ಪ್ರಯೋಜನವಾಗುತ್ತಿರುವ ಹಿನ್ನೆಲೆಯಲ್ಲಿ ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ಅಡಿ ಭಾಗಶಃ ಅನುದಾನ ಹಂಚಿಕೆ ಮಾಡಲಾಗಿದೆ.

---3

| | | | | | Rs. in crores |
|---|---|---|---|---|---|
| **Sl No** | **Schemes** | **Allocation under SCSP** | **Allocation under TSP** | **Allocation under General Budget** | **Total Allocation** |
| 1 | Gruha Lakshmi | 5546.53 | 2335.38 | 20726.5 | 28608.40 |
| 2 | Annabhagya | 1539.18 | 648.41 | 5891.41 | 8079.00 |
| 3 | Shakthi | 1001.00 | 450.45 | 3563.55 | 5015.00 |
| 4 | GruhaJyothi | 1770.45 | 815.48 | 7071.07 | 9657.00 |
| 5 | Yuvanidhi | 123.50 | 52.00 | 474.5 | 650.00 |
| | **Total** | **9980.66** | **4301.72** | **37727.02** | **52009.40** |

ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅಡಿ ಒದಗಿಸಿದ ಅನುದಾನವನ್ನು ಎಸ್.ಸಿ/ಎಸ್.ಟಿ ಜನರಿಗೆ ಮಾತ್ರ ವಿನಿಯೋಗಿಸಲಾಗುತ್ತಿದೆ. ಇತರರಿಗೆ ಸಾಮಾನ್ಯ ಯೋಜನೆಯಡಿ ಅನುದಾನ ಒದಗಿಸಿದ್ದು, ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅನುದಾನವನ್ನು ಸಾಮಾನ್ಯ ಜನರಿಗೆ ವಿನಿಯೋಗಿಸುವುದಿಲ್ಲ.

ಗ್ಯಾರಂಟಿ ಯೋಜನೆಗಳ ಆಯವ್ಯಯ ಸಹ ಅಭಿವೃದ್ಧಿ ಆಯವ್ಯಯದಲ್ಲಿ ಸೇರ್ಪಡೆಯಾಗಿರುವುದರಿಂದ 2024-25ನೇ ಸಾಲಿನಲ್ಲಿ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅಡಿ ಗ್ಯಾರಂಟಿ ಯೋಜನೆಗಳಿಗೆ ರೂ.14,282.38 ಕೋಟಿ ಹಂಚಿಕೆ ಮಾಡಲಾಗಿದೆ. ಈ ಕಾರ್ಯಕ್ರಮಗಳಿಂದ ಎಸ್.ಸಿ/ಎಸ್.ಟಿ ಜನರಿಗೆ ನೇರವಾಗಿ ಪ್ರಯೋಜನವಾಗುತ್ತಿದೆ.

ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ಅನುದಾನವನ್ನು ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದವರ ಅಭಿವೃದ್ಧಿಗೆ ವಿನಿಯೋಗಿಸುತ್ತಿರುವ ಕಾರಣ ಅನ್ಯ ಉದ್ದೇಶಕ್ಕಾಗಿ ಅನುದಾನ ಬಳಸಿರುವುದಿಲ್ಲ. ಆದ್ದರಿಂದ ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ಕಾಯ್ದೆಯ ಉಲ್ಲಂಘನೆಯ ಪ್ರಶ್ನೆ ಉದ್ಭವಿಸುವುದಿಲ್ಲ.

ಗ್ಯಾರಂಟಿ ಯೋಜನೆಗಳಡಿ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅಡಿ ಒದಗಿಸಿರುವ ಅನುದಾನವನ್ನು ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದವರಿಗೆ ಉಪಯೋಗಿಸುತ್ತಿರುವ ಕಾರಣ ಇದರಿಂದ ಯಾವುದೇ ಅನ್ಯಾಯವಾಗುವುದಿಲ್ಲ.

ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದವರ ಹಿತದೃಷ್ಟಿಯಿಂದ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಕಾಯ್ದೆ 2013ರ ಸೆಕ್ಷನ್ 7(ಡಿ) ಯನ್ನು ಈಗಾಗಲೇ ರದ್ದುಪಡಿಸಿ ಕಾಯ್ದೆಗೆ ತಿದ್ದುಪಡಿ ತರಲಾಗಿದೆ. ಇದರ ಪರಿಣಾಮವಾಗಿ ಭಾರೀ ನೀರಾವರಿ, ಲೋಕೋಪಯೋಗಿ, ನಗರಾಭಿವೃದ್ಧಿ, ಸಣ್ಣ ನೀರಾವರಿ ಇತ್ಯಾದಿ ಇಲಾಖೆಗಳಿಗೆ ಕಾಮಗಾರಿಗಳಿಗಾಗಿ ಹಂಚಿಕೆ ಮಾಡುತ್ತಿದ್ದ ಅನುದಾನವನ್ನು ಕಡಿತಗೊಳಿಸಿ, ಫಲಾನುಭವಿ ಆಧಾರಿತ ಕಾರ್ಯಕ್ರಮಗಳಿಗೆ ಹೆಚ್ಚಿನ ಅನುದಾನವನ್ನು ಹಂಚಿಕೆ ಮಾಡಲಾಗಿದೆ.

**ಸಕಇ 220 ಎಸ್ಎಲ್ಪಿ 2024**

**(ಡಾ: ಹೆಚ್.ಸಿ.ಮಹದೇವಪ್ಪ)**
**ಸಮಾಜ ಕಲ್ಯಾಣ ಸಚಿವರು**